Akashvani : Bengaluru
National Bulletin In Kannada
10.09.2025 : 7.35pm

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

10.09.2025 : 7.35pm

*******

**<><*<><>*><>**

<u>ಮುಖ್ಯಾಂಶಗಳು</u>

೧. ನೂತನ ಉಪರಾಷ್ಟ್ರಪತಿಯಾಗಿ ಸಿ.ಪಿ.ರಾಧಾಕೃಷ್ಣನ್ ಆಯ್ಕೆ; ಚುನಾವಣೆಯಲ್ಲಿ ೧೫೨ ಮತಗಳ ಅಂತರದಿಂದ ಗೆಲುವು

೨. ನೇಪಾಳದಲ್ಲಿನ ಬೆಳವಣಿಗೆಗಳ ಬಗ್ಗೆ ಭದ್ರತೆ ಕುರಿತ ಸಂಪುಟ ಸಮಿತಿ ಸಭೆಯಲ್ಲಿ ಚರ್ಚೆ; ಶಾಂತಿ ಕಾಪಾಡುವಂತೆ ಪ್ರಧಾನಿ ನರೇಂದ್ರ ಮೋದಿ ಕರೆ

೩. ಕಠ್ಮಂಡು ವಿಮಾನ ನಿಲ್ದಾಣದಲ್ಲಿ ಸಿಲುಕಿರುವ ೩೯ ಕನ್ನಡಿಗರನ್ನು ಸುರಕ್ಷಿತವಾಗಿ ಕರೆತರಲು ಕ್ರಮ - ಮುಖ್ಯಮಂತ್ರಿ ಸಿದ್ದರಾಮಯ್ಯ

೪. ನವದೆಹಲಿಯಲ್ಲಿಂದು ೧೪ನೇ ಬೃಹತ್ ಪಿಂಚಣಿ ಅದಾಲತ್; ೨೧ ಇಲಾಖೆಗಳು ಮತ್ತು ಸಚಿವಾಲಯಗಳು ಭಾಗಿ

೫. ಏಷ್ಯಾಕಪ್ ಟಿ-೨೦ ಕ್ರಿಕೆಟ್; ಹಾಂಕಾಂಗ್ ವಿರುದ್ಧ ಉದ್ಘಾಟನಾ ಪಂದ್ಯದಲ್ಲಿ ಆಫ್ಘಾನಿಸ್ತಾನಕ್ಕೆ ೯೪ ರನ್‌ಗಳ ಭರ್ಜರಿ ಗೆಲುವು

*><><><*><><><*

ಉಪರಾಷ್ಟ್ರಪತಿಯಾಗಿ ಸಿ ಪಿ ರಾಧಾಕೃಷ್ಣನ್ ಅವರು ಆಯ್ಕೆಯಾಗಿದ್ದಾರೆ. ಈ ಮೂಲಕ, ದೇಶದ ಎರಡನೇ ಅತ್ಯುನ್ನತ ಸಾಂವಿಧಾನಿಕ ಹುದ್ದೆಯನ್ನು ಅವರು ಅಲಂಕರಿಸಲಿದ್ದಾರೆ. ತಮ್ಮ ಆಯ್ಕೆಯನ್ನು ರಾಷ್ಟ್ರೀಯತಾವಾದಿ ಸಿದ್ಧಾಂತದ ಗೆಲುವು ಎಂದು ನೂತನ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಬಣ್ಣಿಸಿದ್ದಾರೆ. ೨೦೪೭ರ ವೇಳೆಗೆ ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡಲು ಶ್ರಮಿಸುವುದಾಗಿ ತಿಳಿಸಿದ್ದಾರೆ. ಉಪರಾಷ್ಟ್ರಪತಿ ಚುನಾವಣೆಯಲ್ಲಿ ೧೫೨ ಮತಗಳ ಅಂತರದಿಂದ ಗೆದ್ದ, ಸಿ.ಪಿ.ರಾಧಾಕೃಷ್ಣನ್ ೪೫೨ ಮತಗಳನ್ನು ಪಡೆದರೆ, ಅವರ ಪ್ರತಿಸ್ಪರ್ಧಿ ಬಿ ಸುದರ್ಶನ್ ರೆಡ್ಡಿ ೩೦೦ ಮತಗಳನ್ನು ಗಳಿಸಿದರು. ತಮ್ಮ ಹೊಸ ಹುದ್ದೆಯಲ್ಲಿ, ರಾಷ್ಟ್ರದ ಅಭಿವೃದ್ಧಿಗಾಗಿ ಸೇವೆ ಸಲ್ಲಿಸುತ್ತೇನೆ. ಪ್ರಜಾಪ್ರಭುತ್ವದಲ್ಲಿ, ಆಡಳಿತ ಪಕ್ಷ ಮತ್ತು ವಿರೋಧ ಪಕ್ಷಗಳು ಎರಡೂ ಮುಖ್ಯ. ಇದು ಒಂದೇ ನಾಣ್ಯದ ಎರಡು ಬದಿಗಳಿದ್ದಂತೆ. ಪ್ರಜಾಪ್ರಭುತ್ವದ ಹಿತಾಸಕ್ತಿಯನ್ನು ರಕ್ಷಿಸಲು ಪ್ರತಿಯೊಬ್ಬರ ಪಾತ್ರವಿದೆ ಎಂದು ಅವರು ಹೇಳಿದರು. ಆರ್‌ಎಸ್‌ಎಸ್ ಮತ್ತು ಬಿಜೆಪಿಯಲ್ಲಿ ಬಲವಾಗಿ ಬೇರೂರಿರುವ ಸಿ.ಪಿ.ರಾಧಾಕೃಷ್ಣನ್ ಅವರು ಶ್ರೀಮಂತ ರಾಜಕೀಯ ಮತ್ತು ಆಡಳಿತಾತ್ಮಕ ಅನುಭವವನ್ನು ಹೊಂದಿದ್ದಾರೆ. ಮೃದುಭಾಷಿ ಮತ್ತು ಸಂಘರ್ಷರಹಿತ ನಾಯಕರಾಗಿರುವ ೬೭ ವರ್ಷದ ಸಿ.ಪಿ.ರಾಧಾಕೃಷ್ಣನ್, ಜುಲೈ ೨೧ ರಂದು ಆರೋಗ್ಯದ ಕಾರಣ ಉಪಾಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿದ ಜಗದೀಪ್ ಧನ್‌ಖರ್ ಅವರ ಸ್ಥಾನವನ್ನು ಅಲಂಕರಿಸಲಿದ್ದಾರೆ. ಅವರು ಈ ಪ್ರತಿಷ್ಠಿತ ಹುದ್ದೆಯನ್ನು ಅಲಂಕರಿಸಿದ ತಮಿಳುನಾಡಿನ ಮೂರನೇ ನಾಯಕರಾಗಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಪ್ರಧಾನಿ ನರೇಂದ್ರ ಮೋದಿ ಅವರು, ಸಿ.ಪಿ.ರಾಧಾಕೃಷ್ಣನ್ ಅವರನ್ನು ಅಭಿನಂದಿಸಿದ್ದಾರೆ. ಸಾರ್ವಜನಿಕ ಜೀವನದಲ್ಲಿ ಅವರ ದಶಕಗಳ ಶ್ರೀಮಂತ ಅನುಭವವು ರಾಷ್ಟ್ರದ ಪ್ರಗತಿಗೆ ಗಣನೀಯ ಕೊಡುಗೆ ನೀಡಲಿದೆ. ಅವರ ಆಯ್ಕೆ ಸಾಂವಿಧಾನಿಕ ಮೌಲ್ಯಗಳನ್ನು ಬಲಪಡಿಸುತ್ತದೆ ಮತ್ತು ಸಂಸದೀಯ ಸಂವಾದವನ್ನು ಹೆಚ್ಚಿಸುತ್ತದೆ ಎಂದು ಹೇಳಿದ್ದಾರೆ. ಸೋತ ಅಭ್ಯರ್ಥಿ ಸುದರ್ಶನ್ ರೆಡ್ಡಿ ಅವರು ಫಲಿತಾಂಶವನ್ನು ವಿನಮ್ರವಾಗಿ ಸ್ವೀಕರಿಸುವುದಾಗಿ ಮತ್ತು ಸಿ.ಪಿ.ರಾಧಾಕೃಷ್ಣನ್ ಅವರನ್ನು ಅಭಿನಂದಿಸುವುದಾಗಿ ತಿಳಿಸಿದ್ದಾರೆ.

*><><><*><><><*

ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ಭದ್ರತೆ ಕುರಿತ ಸಂಪುಟ ಸಮಿತಿ ಸಭೆ ನಿನ್ನೆ ನಡೆದಿದ್ದು, ನೇಪಾಳದಲ್ಲಿನ ಬೆಳವಣಿಗೆಗಳ ಕುರಿತು ಸಮಗ್ರವಾಗಿ ಚರ್ಚೆ ನಡೆಸಿದೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿಯವರು, ನೇಪಾಳದಲ್ಲಿನ ಹಿಂಸಾಚಾರ ಹೃದಯ ವಿದ್ರಾವಕವಾಗಿದೆ ಎಂದು ಹೇಳಿದ್ದಾರೆ. ನೇಪಾಳದಲ್ಲಿ ಯುವ ಸಮೂಹದ ಜೀವಹಾನಿಗೆ ದುಃಖ ವ್ಯಕ್ತಪಡಿಸಿದ ಪ್ರಧಾನಿ ಮೋದಿ, ನೇಪಾಳದ ಸ್ಥಿರತೆ, ಶಾಂತಿ ಮತ್ತು ಸಮೃದ್ಧಿ ಅತ್ಯಂತ ಮಹತ್ವದ್ದಾಗಿದೆ. ನೇಪಾಳದ ನಾಗರಿಕರಿಗೆ ಶಾಂತಿಯನ್ನು ಬೆಂಬಲಿಸುವಂತೆ ಅವರು ಮನವಿ ಮಾಡಿದ್ದಾರೆ.

*><><><*><><><*

ನೇಪಾಳದಲ್ಲಿ ವಿದ್ಯಾರ್ಥಿ-ಯುವಸಮೂಹದ ಕ್ಷಿಪ್ರ ಬೃಹತ್ ಪ್ರತಿಭಟನೆ ಹಿನ್ನೆಲೆಯಲ್ಲಿ ದೇಶಾದ್ಯಂತ ಪ್ರಕ್ಷುಬ್ಧ ವಾತಾವರಣ ಸೃಷ್ಟಿಯಾಗಿದೆ. ಪರಿಣಾಮವಾಗಿ ಕಠ್ಮಂಡು ವಿಮಾನ ನಿಲ್ದಾಣದಲ್ಲಿ ಸಿಲುಕಿರುವ ೩೯ ಕನ್ನಡಿಗರನ್ನು ಸುರಕ್ಷಿತವಾಗಿ ರಾಜ್ಯಕ್ಕೆ ಕರೆತರಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ಸೂಚಿಸಿದ್ದಾರೆ. ಮುಖ್ಯ ಕಾರ್ಯದರ್ಶಿ ಅವರು ಸಂಬಂಧಪಟ್ಟ ಅಧಿಕಾರಿಗಳ ಜೊತೆ ಚರ್ಚಿಸಿ ಅಗತ್ಯ ಕ್ರಮಕ್ಕೆ ಮುಂದಾಗಿದ್ದಾರೆ ಎಂದು ಮುಖ್ಯಮಂತ್ರಿ ಸಚಿವಾಲಯ ತಿಳಿಸಿದೆ.

*><><><*><><><*

ಸಿಬ್ಬಂದಿ, ಸಾರ್ವಜನಿಕ ಕುಂದುಕೊರತೆಗಳು ಮತ್ತು ಪಿಂಚಣಿಗಳ ರಾಜ್ಯ ಸಚಿವ ಡಾ. ಜಿತೇಂದ್ರ ಸಿಂಗ್ ಅವರ ಅಧ್ಯಕ್ಷತೆಯಲ್ಲಿ ನವದೆಹಲಿಯಲ್ಲಿಂದು ೧೪ ನೇ ಪಿಂಚಣಿ ಅದಾಲತ್ ನಡೆಯಲಿದೆ. ೨೧ ಇಲಾಖೆಗಳು ಮತ್ತು ಸಚಿವಾಲಯಗಳಿಗೆ ಸಂಬಂಧಿಸಿದ ಕುಟುಂಬ ಪಿಂಚಣಿ ವಿಷಯಗಳಿಗೆ ಸಂಬಂಧಿಸಿದ ಒಟ್ಟು ೮೯೪ ಕುಂದುಕೊರತೆಗಳನ್ನು ಪರಿಹಾರಕ್ಕಾಗಿ ಅದಾಲತ್‌ನಲ್ಲಿ ಕೈಗೆತ್ತಿಕೊಳ್ಳಲು ಉದ್ದೇಶಿಸಲಾಗಿದೆ ಎಂದು ಸಚಿವಾಲಯ ತಿಳಿಸಿದೆ. ಕುಂದುಕೊರತೆಗಳನ್ನು ತ್ವರಿತವಾಗಿ ಪರಿಹರಿಸುವುದನ್ನು ಖಚಿತಪಡಿಸಿಕೊಳ್ಳಲು ಮತ್ತು ಕುಟುಂಬ ಪಿಂಚಣಿದಾರರ ಘನತೆ ಮತ್ತು ಆರ್ಥಿಕ ಭದ್ರತೆಯನ್ನು ಹೆಚ್ಚಿಸಲು ಸಚಿವಾಲಯ ಬದ್ಧವಾಗಿದೆ ಎಂದು ಹೇಳಿದೆ.

*><><><*><><><*

ಮಾರಿಷಸ್ ಪ್ರಧಾನಿ ನವೀನಚಂದ್ರ ರಾಮಗೂಲಂ ಇಂದು ಉತ್ತರ ಪ್ರದೇಶದ ವಾರಣಾಸಿಗೆ ಭೇಟಿ ನೀಡಲಿದ್ದಾರೆ. ಲಾಲ್ ಬಹದ್ದೂರ್ ಶಾಸ್ತ್ರಿ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ವಾರಣಾಸಿಗೆ ಆಗಮಿಸಲಿರುವ ಅವರನ್ನು ಉತ್ತರ ಪ್ರದೇಶದ ರಾಜ್ಯಪಾಲೆ ಆನಂದಿಬೆನ್ ಪಟೇಲ್, ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಮತ್ತು ಇತರ ಹಿರಿಯ ರಾಜ್ಯ ಅಧಿಕಾರಿಗಳು ಸ್ವಾಗತಿಸಲಿದ್ದಾರೆ. ನಾಳೆ ವಾರಣಾಸಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಲಿದ್ದಾರೆ. ರಾಮಗೂಲಂ ಇಂದಿನಿಂದ ೧೨ ರವರೆಗೆ ವಾರಣಾಸಿಯಲ್ಲಿ ಇರಲಿದ್ದಾರೆ.

*><><><*><><><*

ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಇಂದಿನಿಂದ ಎರಡು ದಿನಗಳ ಕಾಲ ಯುನೈಟೆಡ್ ಅರಬ್ ಎಮಿರೇಟ್ಸ್‌ಗೆ ಭೇಟಿ ನೀಡಲಿದ್ದಾರೆ. ತಮ್ಮ ಭೇಟಿಯ ಮೊದಲ ದಿನದಂದು ಪ್ರಧಾನ್ ಅವರು ಅಬುದಾಬಿ ಶಿಕ್ಷಣ ಇಲಾಖೆಯ ಅಧ್ಯಕ್ಷೆ ಸಾರಾ ಮುಸಲಮ್ ಅವರನ್ನು ಭೇಟಿ ಮಾಡಲಿದ್ದಾರೆ. ನಂತರ ಅವರು, ಐಐಟಿ ದೆಹಲಿ-ಅಬುದಾಬಿ ಕ್ಯಾಂಪಸ್‌ಗೆ ಭೇಟಿ ನೀಡಲಿದ್ದಾರೆ. ಅಲ್ಲಿ ಅವರು, ಅಟಲ್ ಇನ್‌ಕ್ಯುಬಿಯೇಷನ್ ಸೆಂಟರ್ ಅನ್ನು ಉದ್ಘಾಟಿಲಿಸದ್ದಾರೆ. ಇದೇ ವೇಳೆ ಅವರು, ವಿದ್ಯಾರ್ಥಿಗಳು ಮತ್ತು ಅಧ್ಯಾಪಕರೊಂದಿಗೆ ಸಂವಾದ ನಡೆಸಲಿದ್ದಾರೆ. ತಮ್ಮ ಭೇಟಿಯ ೨ನೇ ದಿನದಂದು ಯುಎಇ ಶಿಕ್ಷಣ ಸಚಿವ ಡಾ. ಅಬ್ದುಲ್ ರೆಹಮಾನ್ ಅಲ್ ಅವರ್ ಅವರೊಂದಿಗೆ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್‌ನ ದುಬೈ ಕ್ಯಾಂಪಸ್ ಅನ್ನು ಅವರು ಉದ್ಘಾಟಿಸಲಿದ್ದಾರೆ.

*><><><*><><><*

ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರು, ನವದೆಹಲಿಯಲ್ಲಿಂದು ಅತ್ಯಾಧುನಿಕ ವಿದ್ಯುತ್ ವಾಹನ ಪರೀಕ್ಷಾ ಸೌಲಭ್ಯವನ್ನು ಉದ್ಘಾಟನೆ ಮಾಡಲಿದ್ದಾರೆ. ಈ ಸೌಲಭ್ಯವು ವಿಶೇಷವಾಗಿ ಪೂರ್ವ ಭಾರತದಲ್ಲಿ ವಿದ್ಯುತ್ ವಾಹನ ಬ್ಯಾಟರಿ ತಯಾರಿಕರಿಗೆ ವಿಶ್ವಾಸಾರ್ಹ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಲ್ಪಟ್ಟ ಪರೀಕ್ಷೆ ಮತ್ತು ಪ್ರಮಾಣೀಕರಣವನ್ನು ಒದಗಿಸುತ್ತದೆ. ಉತ್ಪನ್ನ ಸುರಕ್ಷತೆ, ಕಾರ್ಯಕ್ಷಮತೆಯನ್ನು ಖಚಿತಪಡಿಸುತ್ತದೆ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳು ಆಹಾರ ಮತ್ತು ನಾಗರಿಕ ಸರಬರಾಜು ಸಚಿವಾಲಯ ತಿಳಿಸಿದೆ. ಈ ಸೌಲಭ್ಯದ ಸ್ಥಾಪನೆಯು ದೃಢವಾದ ವಿದ್ಯುತ್ ವಾಹನ ಪರಿಸರ ವ್ಯವಸ್ಥೆಯನ್ನು ಸೃಷ್ಟಿಸುವ, ಆಮದು ಅವಲಂಬನೆಯನ್ನು ಕಡಿಮೆ ಮಾಡುವ ಮತ್ತು ದೇಶೀಯ ತಯಾರಿಕರಿಗೆ ಕೈಗೆಟಕುವ ಪರೀಕ್ಷಾ ಸೇವೆಗಳೊಂದಿಗೆ ಸಬಲೀಕರಣಗೊಳಿಸುವ ಸರ್ಕಾರದ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ಸಚಿವಾಲಯ ಹೇಳಿದೆ.

*><><><*><><><*

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯ ದೇಶಾದ್ಯಂತ ಅನುಷ್ಠಾನ ಗೊಳಿಸುವ ಹಿನ್ನೆಲೆಯಲ್ಲಿ ಕೇಂದ್ರ ಚುನಾವಣಾ ಆಯೋಗ ಇಂದು ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮುಖ್ಯ ಚುನಾವಣಾ ಅಧಿಕಾರಿಗಳೊಂದಿಗೆ ದೆಹಲಿಯಲ್ಲಿ ನಿರ್ಣಾಯಕ ಸಭೆ ನಡೆಸಲಿದೆ. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಮತ್ತು ಇತರ ಹಿರಿಯ ಚುನಾವಣಾ ಆಯುಕ್ತರ ಅಧ್ಯಕ್ಷತೆಯಲ್ಲಿ ಸಭೆ ನಡೆಯಲಿದೆ. ಚುನಾವಣಾ ಸಿದ್ಧತೆ, ಮತದಾರರ ಪಟ್ಟಿಯ ನಿಖರತೆ ಮತ್ತು ಪಾರದರ್ಶಕತೆಗೆ ಸಂಬಂಧಿಸಿದ ಹಲವಾರು ವಿ?ಯಗಳು ಕಾರ್ಯಸೂಚಿಯಲ್ಲಿದ್ದರೂ, ದೇಶಾದ್ಯಂತ ಎಸ್‌ಐಆರ್ ಪ್ರಕ್ರಿಯೆಯನ್ನು ಜಾರಿಗೊಳಿಸುವ ಕುರಿತು ಮಹತ್ವದ ಸಮಾಲೋಚನೆ ನಡೆಯಲಿದೆ.

*><><><*><><><*

ಬಾಹ್ಯಾಕಾಶ ಪರಿಶೋಧನೆಯಲ್ಲಿ ಇಸ್ರೋ ಒಂಬತ್ತು ಪ್ರಮುಖ ವಿಶ್ವ ದಾಖಲೆಗಳನ್ನು ನಿರ್ಮಿಸಿದೆ ಮತ್ತು ಮುಂಬರುವ ವ?ಗಳಲ್ಲಿ ೮ ರಿಂದ ೧೦ ದಾಖಲೆಗಳನ್ನು ನಿರ್ಮಿಸುವ ಹಾದಿಯಲ್ಲಿದೆ ಎಂದು ಇಸ್ರೋ ಅಧ್ಯಕ್ಷ ವಿ. ನಾರಾಯಣನ್ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ನಾರಾಯಣನ್, ಚಂದ್ರಯಾನ ಕಾರ್ಯಾಚರಣೆಗಳಿಂದ ಮಂಗಳ ಗ್ರಹ ಪರಿಶೋಧನಾ ಕಾರ್ಯಾಚರಣೆಯವರೆಗೆ ಭಾರತದ ಸಾಧನೆಗಳು ಮತ್ತು ಕ್ರಯೋಜೆನಿಕ್ ತಂತ್ರಜ್ಞಾನದಲ್ಲಿನ ಪ್ರಗತಿಯನ್ನು ವಿವರಿಸಿದರು. ೨೦೧೪ ರಲ್ಲಿ ಮಂಗಳ ಗ್ರಹ ಪರಿಶೋಧನಾ ಕಾರ್ಯಾಚರಣೆಯು ಭಾರತವನ್ನು ತನ್ನ ಮೊದಲ ಪ್ರಯತ್ನದಲ್ಲೇ ಮಂಗಳ ಗ್ರಹವನ್ನು ತಲುಪಿದ ಮೊದಲ ರಾ?ವನ್ನಾಗಿ ಮಾಡಿತು ಎಂದು ಅವರು ಹೇಳಿದರು. ೨೦೧೭ ರಲ್ಲಿ, ಪಿಎಸ್‌ಎಲ್‌ವಿ-ಸಿ ೩೭ ಒಂದೇ ಉಡಾವಣೆಯಲ್ಲಿ ೧೦೪ ಉಪಗ್ರಹಗಳನ್ನು ನಭೋಮಂಡಲಕ್ಕೆ ಉಡಾವಣೆ ಮಾಡುವ ಮೂಲಕ ಇತಿಹಾಸ ಸೃಷ್ಟಿಸಿತು. ೨೦೧೯ ರಲ್ಲಿ ಚಂದ್ರಯಾನ-೨ ಚಂದ್ರನ ಸುತ್ತ ವಿಶ್ವದ ಅತ್ಯುತ್ತಮ ಆರ್ಬಿಟರ್ ಕ್ಯಾಮೆರಾವನ್ನು ಇರಿಸಿತು, ಆದರೆ ೨೦೨೩ ರಲ್ಲಿ ಚಂದ್ರಯಾನ-೩ ಭಾರತವನ್ನು ಚಂದ್ರನ ದಕ್ಷಿಣ ಧ್ರುವದ ಬಳಿ ಬಾಹ್ಯಾಕಾಶ ನೌಕೆಯನ್ನು ಇಳಿಸಿದ ಮೊದಲ ದೇಶವನ್ನಾಗಿ ಮಾಡಿತು ಎಂದು ನಾರಾಯಣನ್ ಹೇಳಿದರು.

*><><><*><><><*

ಅಬುಧಾಬಿಯಲ್ಲಿ ನಿನ್ನೆ ನಡೆದ, ಏಷ್ಯಾ ಕಪ್ ಕ್ರಿಕೆಟ್ ಟೂರ್ನಿಯ ಉದ್ಘಾಟನಾ ಪಂದ್ಯದಲ್ಲಿ, ಅಫ್ಘಾನಿಸ್ತಾನ ತಂಡವು ಹಾಂಗ್ ಕಾಂಗ್ ವಿರುದ್ಧ ೯೪ ರನ್‌ಗಳ ಬೃಹತ್ ಗೆಲುವು ಸಾಧಿಸಿದೆ.

*><><><*><><><*